I/242649/2022

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ : **2022-23ನೇ ಸಾಲಿನಲ್ಲಿ ಹೊಸದಾಗಿ ಐದು (5) ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸುವ ಬಗ್ಗೆ.**

ಓದಲಾಗಿದೆ :
1. ಸರ್ಕಾರದ ಆದೇಶ ಸಂಖ್ಯೆ:ಇಡಿ 04 ಯೋಸಕ 2017, ದಿನಾಂಕ:05.01.2018.
2. 2018-19ನೇ ಸಾಲಿನ (ಫೆಬ್ರವರಿ) ಆಯವ್ಯಯ ಭಾಷಣದ ಕಂಡಿಕೆ:111.
3. 2019-20ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ:116
4. ಸರ್ಕಾರದ ಆದೇಶದ ಸಂಖ್ಯೆ: ಇಡಿ 230 ಯೋಸಕ 2018, ಬೆಂಗಳೂರು, ದಿನಾಂಕ:18.05.2019.
5. ಸರ್ಕಾರದ ಆದೇಶ ಸಂಖ್ಯೆ: ಇಪಿ 142 ಯೋಸಕ 2021, ದಿನಾಂಕ:02.08.2021.
6. ಸರ್ಕಾರದ ಸುತ್ತೋಲೆ ಸಂಖ್ಯೆ: ಇಪಿ 204 ಪಿಎಂಸಿ 2021 ದಿನಾಂಕ:25.10.2021.

******

ಪ್ರಸ್ತಾವನೆ:

ಕರ್ನಾಟಕ ಸರ್ಕಾರವು "ಪ್ರತಿ ಮಗುವೂ ಶಾಲೆಯಲ್ಲಿ ಮತ್ತು ಉತ್ತಮ ಕಲಿಕೆಯೊಂದಿಗೆ" ಎಂಬ ಘೋಷ ನೀತಿಯನ್ನು ಅಳವಡಿಸಿಕೊಂಡಿದ್ದು, ಪ್ರತಿ ಮಗುವಿಗೂ ಶಿಕ್ಷಣ ಹಕ್ಕು ಕಾಯ್ದೆ ಅನ್ವಯ ಗುಣಮಟ್ಟದ ಶಿಕ್ಷಣ ನೀಡುವ ಜವಾಬ್ದಾರಿಯನ್ನು ಹೊಂದಿರುತ್ತದೆ. ವಿದ್ಯಾರ್ಥಿಗಳು ಉತ್ತಮವಾಗಿ ಕಲಿಯಲು ಸಹಕರಿಸುವಂತೆ ಶಾಲೆಗಳಲ್ಲಿ ಬೋಧನಾ ಪದ್ಧತಿಯನ್ನು ಸುಧಾರಿಸಲು ಕ್ರಮ ತೆಗೆದುಕೊಳ್ಳಬೇಕಾಗಿದೆ. ಈ ದೂರದೃಷ್ಟಿಯ ಹಿನ್ನೆಲೆಯಲ್ಲಿ, 2017-18ನೇ ಸಾಲಿನ ಆಯವ್ಯಯ ಘೋಷಣೆಯಂತೆ, ಶಿಕ್ಷಕರು ಮತ್ತು ಇತರ ಸಂಪನ್ಮೂಲಗಳ ಬಳಕೆಯ ಸಮರ್ಪಕತೆಯನ್ನು ಸುಧಾರಿಸಲು, ಒಂದೇ ಭೌಗೋಳಿಕ ಸ್ಥಳಗಳನ್ನು ಆಸ್ತಿತ್ವದಲ್ಲಿರುವ ಶಾಲೆಗಳನ್ನು ಆಡಳಿತಾತ್ಮಕ, ಶೈಕ್ಷಣಿಕ ಮತ್ತು ಕ್ರಿಯಾತ್ಮಕ ಸಂಯೋಜನೆಯೊಂದಿಗೆ ಒಟ್ಟುಗೂಡಿಸಿ, ತಾಲ್ಲೂಕಿಗೆ ಒಂದರಂತೆ 176 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲು ಮೇಲೆ ಓದಲಾದ ಕ್ರಮಾಂಕ (1)ರ ಆದೇಶದಲ್ಲಿ ಅನುಮೋದನೆ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ(2)ರ 2018-19ನೇ ಸಾಲಿನ (ಫೆಬ್ರವರಿ) ಆಯವ್ಯಯ ಭಾಷಣದಲ್ಲಿ ಸನ್ಮಾನ್ಯ ಮುಖ್ಯ ಮಂತ್ರಿಯವರು ಒಂದೇ ಸೂರಿನಡಿ ವಿದ್ಯಾಭ್ಯಾಸ ಕಲ್ಪಿಸಿ ಶಿಕ್ಷಣದ ಗುಣಮಟ್ಟ ಉತ್ತಮಪಡಿಸಲು ಪ್ರಸಕ್ತ ಸಾಲಿನಲ್ಲಿ 100 ಸಂಯೋಜಿತ "ಕರ್ನಾಟಕ ಪಬ್ಲಿಕ್ ಶಾಲೆ"ಗಳನ್ನು ಪ್ರಾರಂಭಿಸಲಾಗುವುದು ಎಂದು ಘೋಷಿಸಿರುತ್ತಾರೆ.

I/242649/2022

ಮೇಲೆ ಓದಲಾದ ಕ್ರಮಾಂಕ(3)ರ 2019-20ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರು "ಮುಂದಿನ 4 ವರ್ಷಗಳಲ್ಲಿ ಒಂದು ಸಾವಿರ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಹೋಬಳಿ ಕೇಂದ್ರ ಸ್ಥಾನಗಳಲ್ಲಿ ಸ್ಥಾಪಿಸಲಾಗುವುದು. ಸದರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ತರಗತಿಗಳಿಂದ 12ನೇ ತರಗತಿಗಳವರೆಗೆ ಶಿಕ್ಷಣವನ್ನು ಒಂದೇ ಸೂರಿನಡಿ ಒದಗಿಸಲಾಗುವುದು. ಈ ಶಾಲೆಗಳಿಗೆ ಕೇಂದ್ರಿಯ ವಿದ್ಯಾಲಯದ ಮಾದರಿಯಲ್ಲಿ ಪ್ರತ್ಯೇಕ ಸಂಘಟನೆ ಹಾಗೂ ಮಾರ್ಗಸೂಚಿಗಳನ್ನು ನಿಗದಿಪಡಿಸಲಾಗುವುದು" ಎಂದು ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ(1)ರಲ್ಲಿ, 2019-20ನೇ ಸಾಲಿನಲ್ಲಿ ಈಗಾಗಲೇ 176 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲಾಗಿದೆ. ಜೊತೆಗೆ, ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಕನಿಷ್ಠ ಒಂದು ಕರ್ನಾಟಕ ಪಬ್ಲಿಕ್ ಶಾಲೆ ಬರುವಂತೆ ಮೇಲೆ ಓದಲಾದ ಕ್ರಮಸಂಖ್ಯೆ (4) ರಲ್ಲಿ 100 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲಾಗಿದೆ. ರಾಜ್ಯದಲ್ಲಿ ಒಟ್ಟು 276 ಕರ್ನಾಟಕ ಪಬ್ಲಿಕ್ ಶಾಲೆಗಳು ಪ್ರಾರಂಭಿಸಲಾಗಿದೆ. ಮುಂದುವರೆದು, 2022-2023ನೇ ಸಾಲಿಗೆ ಹಾಸನ ಜಿಲ್ಲೆ ವ್ಯಾಪ್ತಿಯಡಿ ಹೊಸದಾಗಿ ಐದು (5) ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸುವ ಬಗ್ಗೆ ತೀರ್ಮಾನಿಸಲಾಗಿರುತ್ತದೆ.

ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಪಿ 09ಎಂಪಿಇ 2021, ಬೆಂಗಳೂರು**

**ದಿನಾಂಕ:04.04.2022**

ಪ್ರಸ್ತಾವನೆಯಲ್ಲಿ ವಿವರಿಸಲಾಗಿರುವ ಅಂಶಗಳ ಹಿನ್ನೆಲೆಯಲ್ಲಿ ಈಗಾಗಲೇ ಸ್ಥಾಪಿಸಲಾಗಿರುವ 276 ಕರ್ನಾಟಕ ಪಬ್ಲಿಕ್ ಶಾಲೆಗಳ ಜೊತೆಗೆ, 2022-23ನೇ ಸಾಲಿಗೆ ಹೊಸದಾಗಿ ಕೆಳಕಂಡ ಐದು (5) ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲು ಕೆಲವು ನಿರ್ದೇಶನಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

| ಕ್ರಮ ಸಂಖ್ಯೆ | ಶಾಲೆ ವಿವರ |
|---|---|
| 1. | ಸರ್ಕಾರಿ ಪದವಿ ಪೂರ್ವ ಕಾಲೇಜು, ಉದಯಪುರ, ದಂಡಿಗನಹಳ್ಳಿ, ಚನ್ನರಾಯಪಟ್ಟಣ, ಹಾಸನ ಜಿಲ್ಲೆ |
| 2. | ಸರ್ಕಾರಿ ಪದವಿ ಪೂರ್ವ ಕಾಲೇಜು, ಶಾಂತಿಗ್ರಾಮ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ |
| 3. | ಸರ್ಕಾರಿ ಪದವಿ ಪೂರ್ವ ಕಾಲೇಜು, (ಬಾಲಕರ) ಹೊಳೆನರಸೀಪುರ ಟೌನ್, ಹಾಸನ ಜಿಲ್ಲೆ |
| 4. | ಸರ್ಕಾರಿ ಪದವಿ ಪೂರ್ವ ಕಾಲೇಜು, (ಬಾಲಕಿಯರು) ಹೊಳೆನರಸೀಪುರ ಟೌನ್, ಹಾಸನ ಜಿಲ್ಲೆ |
| 5. | ಸರ್ಕಾರಿ ಪದವಿ ಪೂರ್ವ ಕಾಲೇಜು, ಸೋಮನಹಳ್ಳಿ, ದುದ್ದಹೋಬಳಿ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ |

I. ಮೇಲ್ಕಂಡ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಆವರಣಕ್ಕೆ ಹೊಂದಿಕೊಳ್ಳುವಂತೆ ಸದರಿ ಕಾಲೇಜುಗಳ ಸಮೀಪದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಶಾಲೆ ಮತ್ತು ಪ್ರೌಢ ಶಾಲೆಗಳನ್ನು ಸದರಿ ಕಾಲೇಜುಗಳೊಂದಿಗೆ ಕ್ರೋಢೀಕರಿಸಿ, ಪ್ರಾರಂಭಿಸತಕ್ಕದ್ದು.

II. ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸುವ ಉದ್ದೇಶಕ್ಕಾಗಿ ಪ್ರತಿ ಕೆ.ಪಿ.ಎಸ್ ಶಾಲೆಗೆ ರೂ.25.00 ಲಕ್ಷಗಳ ಅನುದಾನವನ್ನು ಮಂಜೂರು ಮಾಡಿದ್ದು, ಸದರಿ ಮೊತ್ತಕ್ಕೆ ಸೀಮಿತಿಗೊಳಿಸಿ, ಹೆಚ್ಚುವರಿ ಅನುದಾನವನ್ನು ಕೋರಬಾರದೆಂಬ ಷರತ್ತಿಗೊಳ್ಳಪಟ್ಟು ಅನುಮೋದನೆ ನೀಡಿದೆ

III. ಪೂರ್ವ ಪ್ರಾಥಮಿಕ ತರಗತಿ ಹಾಗೂ ಇಂಗ್ಲೀಷ್ ಮಾಧ್ಯಮ ತರಗತಿಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸತಕ್ಕದ್ದು.

IV. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರು "ಕರ್ನಾಟಕ ಪಬ್ಲಿಕ್ ಶಾಲೆ" ಯೋಜನೆಯ ಅನುಷ್ಠಾನ ಹಾಗೂ ನೋಡಲ್ ಅಧಿಕಾರಿಯಾಗಿರುತ್ತಾರೆ. ಇವರು ಕಾಲಕಾಲಕ್ಕೆ ಹೊರಡಿಸುವ ಸುತ್ತೋಲೆ ಮತ್ತು ಮಾರ್ಗಸೂಚಿಗಳನ್ನು ಪಾಲಿಸತಕ್ಕದ್ದು.

V. ಮೇಲೆ ಓದಲಾದ ಕ್ರಮ ಸಂಖ್ಯೆ (6) ರಲ್ಲಿ ಹೊರಡಿಸಿರುವ ಸರ್ಕಾರದ ಸುತ್ತೋಲೆ ರನ್ವಯ ಕರ್ನಾಟಕ ಪಬ್ಲಿಕ್ ಶಾಲೆಯ ಬಲವರ್ಧನೆಗಾಗಿ ಸ್ಥಳೀಯ ಸಂಘಸಂಸ್ಥೆಗಳು, ದಾನಿಗಳು, ಖಾಸಗಿ ಸಂಸ್ಥೆಗಳ ಸಾಮಾಜಿಕ ಹೊಣೆಗಾರಿಕೆ ನಿಧಿ (ಸಿ.ಎಸ್.ಆರ್) ಮೊದಲಾದ ಸಂಪನ್ಮೂಲಗಳ ಸಹಕಾರವನ್ನು ಪಡೆದುಕೊಂಡು ಸದರಿ ಕೆ.ಪಿ.ಎಸ್ ಶಾಲೆಗಳನ್ನು ಅಭಿವೃದ್ಧಿಪಡಿಸತಕ್ಕದ್ದು.

VI. ಮೇಲೆ ಓದಲಾದ ಕ್ರಮಸಂಖ್ಯೆ (5) ರಲ್ಲಿ ನೀಡಿರುವ ಮಾರ್ಗಸೂಚಿಗಳನ್ವಯ (ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ) ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯನ್ನು ರಚಿಸತಕ್ಕದ್ದು.

VII. ನೂತನ ರಾಷ್ಟ್ರೀಯ ಶಿಕ್ಷಣ ನೀತಿರನ್ವಯ, ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ವೃತ್ತಿ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಲು ಸ್ಥಳೀಯ ಐ.ಟಿ.ಐ, ಪಾಲಿಟೆಕ್ನಿಕ್, ಇಂಜಿನಿಯರಿಂಗ್ ಕಾಲೇಜು ಹಾಗೂ ಇತರೆ ಸರ್ಕಾರೇತರ ಸಂಸ್ಥೆಗಳ ಸಹಯೋಗದೊಂದಿಗೆ ರಾಷ್ಟ್ರೀಯ ವೃತ್ತಿ ಕೌಶಲ್ಯ ಚೌಕಟ್ಟು ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸತಕ್ಕದ್ದು.

VIII. ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಉತ್ಕೃಷ್ಟ ದರ್ಜೆಯ ಸೌಲಭ್ಯಗಳನ್ನೊಳಗೊಂಡ ಮಾದರಿ ಶಾಲೆಯನ್ನಾಗಿ ರೂಪಿಸತಕ್ಕದ್ದು.

IX. ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಶೈಕ್ಷಣಿಕ ಮತ್ತು ಆಡಳಿತಾತ್ಮಕ ವಿಷಯಗಳ ಏಕರೂಪತೆಯನ್ನು ತರುವನಿಟ್ಟಿನಲ್ಲಿ ಇಲಾಖೆಯು ಹೊರಡಿಸುವ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

I/242649/2022

ಮೇಲೆ ಓದಲಾದ ಕ್ರಮಾಂಕ (1) ಮತ್ತು (4)ರ ಆದೇಶಗಳಲ್ಲಿ ನಿಗಧಿಪಡಿಸಿರುವ ಷರತ್ತು ಹಾಗೂ ನಿಯಮಗಳನ್ನು ಹೊಸದಾಗಿ 5 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸುವ ಸಮಯದಲ್ಲಿಯೂ ಯಥಾವತ್ತಾಗಿ ಪಾಲಿಸತಕ್ಕದ್ದು.

ಸದರಿ ಶಾಲೆಗಳಿಗೆ ಬೇಕಾಗುವ ಅನುದಾನವನ್ನು 2022-23 ನೇ ಸಾಲಿನ ಆಯವ್ಯಯದಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಗಳಿಗೆ ಶಾಲೆಗಳಿಗೆ ನಿಗದಿಯಾಗಿರುವ ಲೆಕ್ಕ ಶೀರ್ಷಿಕೆ 4202-01-201-1-06 ರಡಿ ಅನುದಾನ ಒದಗಿಸಲಾಗಿದ್ದು, ಸದರಿ ಅನುದಾನವನ್ನು ತ್ರೈಮಾಸಿಕವಾರು ಬಿಡುಗಡೆ ಮಾಡುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 360 ವೆಚ್ಚ-8/2020 ದಿನಾಂಕ:27.01.2022ರಲ್ಲಿ ನೀಡಿರುವ ಸಹಮತದನ್ವಯ ಹಾಗೂ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

04.04.2022

(ಎಸ್.ಆರ್.ಎಸ್.ನಾಥನ್)
ವಿಶೇಷಾಧಿಕಾರಿ ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ (ಯೋಜನೆ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ

ಇವರಿಗೆ;

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
3. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.
4. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು.
5. ಅಪರ ಆಯುಕ್ತರು, ಕಲ್ಬುರ್ಗಿ ಮತ್ತು ಬೆಳಗಾವಿ ವಿಭಾಗ, ಸಾರ್ವಜನಿಕ ಶಿಕ್ಷಣ ಇಲಾಖೆ.
6. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ಬೆಂಗಳೂರು.
7. ನಿರ್ದೇಶಕರು, (ಪ್ರಾಥಮಿಕ/ಪ್ರೌಢ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
8. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯಗೋಪುರ, ಬೆಂಗಳೂರು.
9. ಉಪನಿರ್ದೇಶಕರು, ಖಜಾನಾ ಗಣಕ ಕೇಂದ್ರ, #49, ಖನಿಜ ಭವನ, ಬೆಂಗಳೂರು.
10. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
11. ಸರ್ಕಾರದ ಉಪಕಾರ್ಯದರ್ಶಿ-2, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
12. ಸಾಪ್ತಾಹಿಕ ರಾಜ್ಯ ಪತ್ರ/ಶಾಖಾರಕ್ಷಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ.**

1. ಮಾನ್ಯ ಮುಖ್ಯಮಂತ್ರಿಯವರ ಆಪ್ತಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬೆಂಗಳೂರು.